ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52,

**ಆದೇಶ ಸಂಖ್ಯೆ: ರಾಚುಆ.272.ಟಿಜೆಡ್‌ಪಿ.2010, ಬೆಂಗಳೂರು ದಿನಾಂಕ: 06-12-2010**

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆ ನಡೆಸುವ) ನಿಯಮಗಳು 1993 ರ ನಿಯಮ 12 ರನ್ವಯ ರಾಜ್ಯದ ಅವಧಿ ಮುಗಿಯುವ 27 ಜಿಲ್ಲಾ ಪಂಚಾಯತಿ ಮತ್ತು 176 ತಾಲ್ಲೂಕು ಪಂಚಾಯತಿಗಳಿಗೆ ಈ ಕೆಳಗೆ ನಮೂದಿಸಿರುವ ಚುನಾವಣಾ ವೇಳಾಪಟ್ಟಿಯ ಪ್ರಕಾರ ಚುನಾವಣೆಗಳನ್ನು ನಡೆಸಲು ಆದೇಶಿಸಿದೆ. ಚುನಾವಣೆಗಳನ್ನು ಎರಡು ಹಂತದಲ್ಲಿ ನಡೆಸತಕ್ಕದ್ದು.

ದಾವಣಗೆರೆ, ಗದಗ ಮತ್ತು ಹಾವೇರಿ ಜಿಲ್ಲಾ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುವುದಾಗಿ ಆಯೋಗದ ವಕೀಲರು ತಿಳಿಸಿರುತ್ತಾರೆ. ಅದರಂತೆ ಈ ಮೂರು ಜಿಲ್ಲೆಗಳ ಜಿಲ್ಲಾ ಪಂಚಾಯತಿ ಚುನಾವಣೆಗಳನ್ನು ಹೊರತುಪಡಿಸಿದೆ ಹಾಗೂ ಈ ಚುನಾವಣಾ ವೇಳಾಪಟ್ಟಿಯು ಈ ಮೂರು ಜಿಲ್ಲಾ ಪಂಚಾಯತಿಗಳಿಗೆ ಅನ್ವಯವಾಗುವುದಿಲ್ಲ.

**-: ಮೊದಲನೆ ಹಂತ :-**

**ಈ ಕೆಳಕಂಡ ಜಿಲ್ಲೆಗಳಲ್ಲಿನ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ (ದಾವಣಗೆರೆ ಜಿಲ್ಲಾ ಪಂಚಾಯತಿ ಹೊರತುಪಡಿಸಿ) ಗಳಿಗೆ ಈ ಕೆಳಗೆ ನಮೂದಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ದಿನಾಂಕ: 26-12-2010 ರಂದು ಮತದಾನ ನಡೆಸತಕ್ಕದ್ದು.**

1. ಬೆಂಗಳೂರು ನಗರ
2. ಬೆಂಗಳೂರು ಗ್ರಾಮಾಂತರ
3. ರಾಮನಗರ
4. ಚಿತ್ರದುರ್ಗ
5. ದಾವಣಗೆರೆ
6. ಕೋಲಾರ
7. ಚಿಕ್ಕಬಳ್ಳಾಪುರ
8. ಶಿವಮೊಗ್ಗ
9. ತುಮಕೂರು
10. ಬೀದರ್
11. ಬಳ್ಳಾರಿ
12. ಗುಲ್ಬರ್ಗಾ
13. ಯಾದಗಿರಿ
14. ರಾಯಚೂರು
15. ಕೊಪ್ಪಳ

**ಚುನಾವಣಾ ವೇಳಾ ಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 08-12-2010 (ಬುಧವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 15-12-2010 (ಬುಧವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 16-12-2010 (ಗುರುವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 18-12-2010 (ಶನಿವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ | 26-12-2010 (ಭಾನುವಾರ) |
| 6 | ಮರು ಮತದಾನ ಅವಶ್ಯವಿದ್ದಲ್ಲಿ ದಿನಾಂಕ ಮತ್ತು ದಿನ | 31-12-2010 (ಶುಕ್ರವಾರ) |
| 7 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 05-01-2011 (ಬುಧವಾರ) |
| 8 | ಮತದಾನದ ಸಮಯ ದಿನಾಂಕ: 26-12-2010 ರಂದು ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | |
| 9 | ಮತಗಳ ಎಣಿಕೆಯು ದಿನಾಂಕ: 04-01-2011 ರಂದು ಬೆಳಿಗ್ಗೆ 8.00 ಘಂಟೆಯಿಂದ (ತಾಲ್ಲೂಕಿನ ಕೇಂದ್ರ ಸ್ಥಳಗಳಲ್ಲಿ) | |

--: ಎರಡನೇ ಹಂತ :--

**ಈ ಕೆಳಕಂಡ ಜಿಲ್ಲೆಗಳಲ್ಲಿನ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ( ಗದಗ ಮತ್ತು ಹಾವೇರಿ ಜಿಲ್ಲಾ ಪಂಚಾಯತಿ ಹೊರತುಪಡಿಸಿ) ಗಳಿಗೆ ಈ ಕೆಳಗೆ ನಮೂದಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ದಿನಾಂಕ: 31-12-2010 ರಂದು ಮತದಾನ ನಡೆಸತಕ್ಕದ್ದು.**

1. ಮೈಸೂರು
2. ಚಿಕ್ಕಮಗಳೂರು
3. ದಕ್ಷಿಣ ಕನ್ನಡ
4. ಹಾಸನ
5. ಕೊಡಗು
6. ಮಂಡ್ಯ
7. ಚಾಮರಾಜನಗರ
8. ಉಡುಪಿ
9. ಬೆಳಗಾವಿ
10. ಬಿಜಾಪುರ
11. ಹಾವೇರಿ
12. ಬಾಗಲಕೋಟೆ
13. ಉತ್ತರ ಕನ್ನಡ
14. ಧಾರವಾಡ
15. ಗದಗ

**ಚುನಾವಣಾ ವೇಳಾ ಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 13-12-2010 (ಸೋಮವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 20-12-2010 (ಸೋಮವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 21-12-2010 (ಮಂಗಳವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 23-12-2010 (ಗುರುವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ | 31-12-2010 (ಶುಕ್ರವಾರ) |
| 6 | ಮರು ಮತದಾನ ಅವಶ್ಯವಿದ್ದಲ್ಲಿ ದಿನಾಂಕ ಮತ್ತು ದಿನ | 03-01-2011 (ಸೋಮವಾರ) |
| 7 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 05-01-2011 (ಬುಧವಾರ) |
| 8 | ಮತದಾನದ ಸಮಯ ದಿನಾಂಕ: 31-12-2010 ರಂದು ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | |
| 9 | ಮತಗಳ ಎಣಿಕೆಯು ದಿನಾಂಕ: 04-01-2011 ರಂದು ಬೆಳಿಗ್ಗೆ 8.00 ಘಂಟೆಯಿಂದ (ತಾಲ್ಲೂಕಿನ ಕೇಂದ್ರ ಸ್ಥಳಗಳಲ್ಲಿ) | |

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು 1993 ರ ನಿಯಮ 12 ರ ಅಡಿಯಲ್ಲಿ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ-1 ರಲ್ಲಿ ವೇಳಾಪಟ್ಟಿಯಲ್ಲಿ ನಮೂದಿಸಿದ ದಿನಾಂಕದಂದು ಹೊರಡಿಸತಕ್ಕದ್ದು ಮತ್ತು ಹಾಗೆ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತಿ ಕಛೇರಿ, ತಾಲ್ಲೂಕು ಪಂಚಾಯತಿ ಕಛೇರಿ ಹಾಗೂ ಇನ್ನಿತರೆ ಮುಖ್ಯ ಸ್ಥಳಗಳಲ್ಲೂ ಸಹ ಪ್ರದರ್ಶಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ-3 ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ಸರ್ಕಾರಕ್ಕೆ ವೆಚ್ಚಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

ಸದಾಚಾರ ಸಂಹಿತೆಯು ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದಲೇ ಅಂದರೆ ದಿನಾಂಕ: 06-12-2010 ರ ಮಧ್ಯರಾತ್ರಿ 12-00 ಗಂಟೆಯಿಂದ ಜಾರಿಗೆ ಬರುತ್ತದೆ. ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ: 05-01-2011 ರವರೆಗೆ ಜಾರಿಯಲ್ಲಿರುತ್ತದೆ. ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

ಸಿ.ಆರ್.ರೇವಣ್ಣ.

(ಸಿ.ಆರ್.ರೇವಣ್ಣ)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

ಇವರಿಗೆ : ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು